1 ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾ.ದಂ.ರವರ ನ್ಯಾಯಾಲಯ, ತರೀಕೆರೆ.

# ಕ್ರಿ ಮೊ ಸಂಖ್ಯೆ 1239/2023

ಪಿರ್ಯಾದಿ ಃ ರಾಜ್ಯದ ಪರವಾಗಿ ಬೀರೂರು ಪೊಲೀಸರು

- ವಿರುದ್ಧ -

ಆರೋಪಿ/ತರುಃ

1) ರಾಮಪ್ಪ ಬಿನ್ ಮುನಿಯಪ್ಪ, 62 ವರ್ಷ, ಕೂಲಿ ಕೆಲಸ, ವಾಸಃ ಕುಡ್ಲೂರು ಗ್ರಾಮ ತರೀಕೆರೆ ತಾಲ್ಲೂಕು.
2) ಮಂಜುಳ ಕೋಂ ದೇವರಾಜ, 35 ವರ್ಷ, ಕೂಲಿಕೆಲಸ,
3) ದೇವರಾಜ ಬಿನ್ ಲೇಟ್ ಗಾಂಧಿ, 44 ವರ್ಷ, ಕೂಲಿ ಕೆಲಸ,
4) ಕಣ್ಣಮ್ಮ ಕೋಂ ಏಳುಮಲೈ, 43 ವರ್ಷ,
5) ಮೀನಾಕ್ಷಿ ಕೋಂ ಕೃಷ್ಣಪ್ಪ, 54 ವರ್ಷ, ಕೂಲಿಕೆಲಸ,
6) ಮಂಜು ಬಿನ್ ರಾಮಪ್ಪ, 28 ವರ್ಷ, ಕೂಲಿ ಕೆಲಸ,
7) ನೀಲಾವತಿ ಕೋಂ ಸುರೇಶ.ಟಿ, 34 ವರ್ಷ, ಕೂಲಿಕೆಲಸ,
8) ಲೋಹಿತ ಬಿನ್ ಕೃಷ್ಣಪ್ಪ, 33 ವರ್ಷ, ಕೂಲಿ ಕೆಲಸ,

ಎಲ್ಲರೂ ವಾಸಃ ಕುಡ್ಲೂರು ಗ್ರಾಮ, ತರೀಕೆರೆ ತಾಲ್ಲೂಕು.

---

## -ಃದೋಷಾರೋಪಣೆಃ-

ಶ್ರೀಮತಿ ಉರ್ಮಿಳ.ವಿ., ಬಿ.ಎ.ಎಲ್, ಎಲ್.ಎಲ್.ಬಿ., 1 ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾ.ದಂ., ತರೀಕೆರೆ ಆದ ನಾನು ನಿಮ್ಮ ವಿರುದ್ಧ ಮಾಡುವ ದೋಷಾರೋಪಣೆಗಳೇನೆಂದರೆಃ-

ದಿನಾಂಕ 26.10.2022 ರಂದು ಮಧ್ಯಾಹ್ನ 03.30 ಗಂಟೆ ಸಮಯದಲ್ಲಿ ಬೀರೂರು ಪೊಲೀಸ್ ಠಾಣಾ ಸರಹದ್ದಿನ ಕುಡ್ಲೂರು ಗ್ರಾಮದ ಅಂಬೇಡ್ಕರ್ ನಗರದ ಚಾಸಾ-1 ಗೀತಾರವರ ಮನೆಯ ಹತ್ತಿರ ಚಾಸಾ-1 ರವರ ತಾಯಿ ಚಾಸಾ-4 ಕಮಲಮ್ಮರವರು 1 ನೇ ಆರೋಪಿಯಾದ ನಿಮಗೆ ದೀಪಾವಳಿ ಹಬ್ಬದ ದಿನ ಮನೆಯ ಮುಂದೆ ಪಟಾಕಿ ಹೊಡೆಯ ಬೇಡಿ ನಮ್ಮ ಕುರಿಗಳು ಹೆದರುತ್ತವೆ ಎಂದು ಹೇಳಿದ ವಿಚಾರವಾಗಿ, ಆರೋಪಿತರಾದ ನೀವು ಏಕೋದ್ದೇಶದಿಂದ ಅಕ್ರಮ ಕೂಟ ಕಟ್ಟಿಕೊಂಡು ಬಂದು ಅಕ್ರಮ ಕೂಟದ ಸದಸ್ಯರಾಗಿದ್ದು, ಆದಕಾರಣ ಆರೋಪಿತರಾದ ನೀವು ಭಾರತೀಯ

ದಂಡ ಸಂಹಿತೆ ಕಲಂ 143 ರ ಸಹವಾಚಕ ಕಲಂ 149 ರಡಿಯಲ್ಲಿ ಶಿಕ್ಷಾರ್ಹ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞಾನದೊಳಗೆ ಮಾಡಿರುವಿರಿ.

ಎರಡನೇಯದಾಗಿ, ಅದೇ ದಿನ, ಅದೇ ಸಮಯ ಹಾಗೂ ಅದೇ ಸ್ಥಳದಲ್ಲಿ ಆರೋಪಿತರಾದ ನೀವು ಏಕೋದ್ದೇಶದಿಂದ ಅಕ್ರಮ ಕೂಟ ಕಟ್ಟಿಕೊಂಡು ಬಂದು ದೊಂಬಿ ಮಾಡಿದ್ದು, ಆದಕಾರಣ ಆರೋಪಿತರಾದ ನೀವು ಭಾರತೀಯ ದಂಡ ಸಂಹಿತೆ ಕಲಂ 147 ರ ಸಹವಾಚಕ ಕಲಂ 149 ರಡಿಯಲ್ಲಿ ಶಿಕ್ಷಾರ್ಹ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞಾನದೊಳಗೆ ಮಾಡಿರುವಿರಿ.

ಮೂರನೇಯದಾಗಿ, ಅದೇ ದಿನ, ಅದೇ ಸಮಯ ಹಾಗೂ ಅದೇ ಸ್ಥಳದಲ್ಲಿ ಆರೋಪಿತರಾದ ನೀವು ಏಕೋದ್ದೇಶದಿಂದ ಅಕ್ರಮ ಕೂಟ ಕಟ್ಟಿಕೊಂಡು 1 ನೇ ಆರೋಪಿಯಾದ ನೀವು ಚಾಸಾ-4 ರವರಿಗೆ ನೀನ್ಯಾವಳೇ ಕೇಳಲು ಬೇವರ್ಸಿ ಮುಂಡೆ ಅವಾಚ್ಯ ಶಬ್ದಗಳಿಂದ ಬೈದು ಹಾಗೂ 2 ರಿಂದ 8 ನೇ ಆರೋಪಿತರಾದ ನೀವು ಚಾಸಾ-1, 4 ಮತ್ತು ಚಾಸಾ-5 ಕಣ್ಣಪ್ಪ ರವರಿಗೆ ಅವಾಚ್ಯ ಶಬ್ದಗಳಿಂದ ಬೈದು ಅವಮಾನ ಮಾಡಿದ್ದು, ಆದಕಾರಣ ಆರೋಪಿತರಾದ ನೀವು ಭಾರತೀಯ ದಂಡ ಸಂಹಿತೆ ಕಲಂ 504 ರ ಸಹವಾಚಕ ಕಲಂ 149 ರಡಿಯಲ್ಲಿ ಶಿಕ್ಷಾರ್ಹ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞಾನದೊಳಗೆ ಮಾಡಿರುವಿರಿ.

ನಾಲ್ಕನೇಯದಾಗಿ, ಅದೇ ದಿನ, ಅದೇ ಸಮಯ ಹಾಗೂ ಅದೇ ಸ್ಥಳದಲ್ಲಿ ಆರೋಪಿತರಾದ ನೀವು ಏಕೋದ್ದೇಶದಿಂದ ಅಕ್ರಮ ಕೂಟ ಕಟ್ಟಿಕೊಂಡು 8 ನೇ ಆರೋಪಿಯಾದ ಚಾಸಾ-1 ಮತ್ತು 4 ರವರಿಗೆ ಸಾರ್ವಜನಿಕ ಸ್ಥಳದಲ್ಲಿ ಮಾನಭಂಗ ಮಾಡುವ ಉದ್ದೇಶದಿಂದ ತಲೆ ಕೂದಲನ್ನು ಹಿಡಿದು ಎಳೆದಾಡಿದ್ದು, 3 ನೇ ಆರೋಪಿಯಾದ ನೀವು ಚಾಸಾ-1 ಮತ್ತು 4 ರವರಿಗೆ ಸಾರ್ವಜನಿಕ ಸ್ಥಳದಲ್ಲಿ ಮಾನಭಂಗ ಉದ್ದೇಶದಿಂದ ನೂಕಾಡಿ, ತಳ್ಳಾಡಿ, ಕಾಲಿನಿಂದ ಹೊಡೆದು ಚಾಸಾ-4 ರವರ ಸೀರೆಯನ್ನು ಹಿಡಿದು ಎಳೆದಾಡಿ, ಚಾಸಾ-1 ಮತ್ತು 4 ರವರ ಮಾನಕ್ಕೆ ಧಕ್ಕೆಯನ್ನುಂಟು ಮಾಡಿದ್ದು, ಆದಕಾರಣ ಆರೋಪಿತರಾದ ನೀವು ಭಾರತೀಯ ದಂಡ ಸಂಹಿತೆ ಕಲಂ 354 ರ ಸಹವಾಚಕ ಕಲಂ 149 ರಡಿಯಲ್ಲಿ ಶಿಕ್ಷಾರ್ಹ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞಾನದೊಳಗೆ ಮಾಡಿರುವಿರಿ.

ಐದನೇಯದಾಗಿ, ಅದೇ ದಿನ, ಅದೇ ಸಮಯ ಹಾಗೂ ಅದೇ ಸ್ಥಳದಲ್ಲಿ ಆರೋಪಿತರಾದ ನೀವು ಏಕೋದ್ದೇಶದಿಂದ ಅಕ್ರಮ ಕೂಟ ಕಟ್ಟಿಕೊಂಡು ಬಂದು, 4 ನೇ ಆರೋಪಿಯಾದ ನೀವು ಚಾಸಾ-4 ರವರಿಗೆ ಕಲ್ಲಿನಿಂದ ತಲೆಗೆ ಹೊಡೆದು ಸಾಮಾನ್ಯ ಸ್ವರೂಪದ ಗಾಯವನ್ನುಂಟು ಮಾಡಿದ್ದು, ಆದಕಾರಣ ಆರೋಪಿತರಾದ ನೀವು ಭಾರತೀಯ ದಂಡ ಸಂಹಿತೆ ಕಲಂ 324 ರ ಸಹವಾಚಕ ಕಲಂ 149 ರಡಿಯಲ್ಲಿ ಶಿಕ್ಷಾರ್ಹ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞಾನದೊಳಗೆ ಮಾಡಿರುವಿರಿ.

ಆರನೇಯದಾಗಿ, ಅದೇ ದಿನ, ಅದೇ ಸಮಯ ಹಾಗೂ ಅದೇ ಸ್ಥಳದಲ್ಲಿ ಆರೋಪಿತರಾದ ನೀವು ಏಕೋದ್ದೇಶದಿಂದ ಅಕ್ರಮ ಕೂಟ ಕಟ್ಟಿಕೊಂಡು ಬಂದು, 3 ನೇ

ಆರೋಪಿಯಾದ ನೀವು ಚಾಸಾ-1 ಮತ್ತು 4 ರವರಿಗೆ ಕಾಲಿನಿಂದ ಹೊಡೆದು, 5 ರಿಂದ 7 ನೇ ಆರೋಪಿತರಾದ ನೀವು ಚಾಸಾ-4 ರವರ ತಲೆ ಕೂದಲನ್ನು ಹಿಡಿದು ಎಳೆದಾಡಿ, ಚಾಸಾ-5 ರವರಿಗೆ ಕೈಯಿಂದ ಎದೆಗೆ, ಭುಜಕ್ಕೆ ಹೊಡೆದು, ಸಾಮಾನ್ಯ ಸ್ವರೂಪದ ನೋವುಂಟು ಮಾಡಿದ್ದು, ಆದಕಾರಣ ಆರೋಪಿತರಾದ ನೀವು ಭಾರತೀಯ ದಂಡ ಸಂಹಿತೆ ಕಲಂ 323 ರ ಸಹವಾಚಕ ಕಲಂ 149 ರಡಿಯಲ್ಲಿ ಶಿಕ್ಷಾರ್ಹ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞಾನದೊಳಗೆ ಮಾಡಿರುವಿರಿ.

ಏಳನೇಯದಾಗಿ, ಅದೇ ದಿನ, ಅದೇ ಸಮಯ ಹಾಗೂ ಅದೇ ಸ್ಥಳದಲ್ಲಿ ಆರೋಪಿತರಾದ ನೀವು ಏಕೋದ್ದೇಶದಿಂದ ಅಕ್ರಮ ಕೂಟ ಕಟ್ಟಿಕೊಂಡು ಬಂದು, 2 ನೇ ಆರೋಪಿಯಾದ ನೀವು ಚಾಸಾ-1 ರವರ ಮನೆಯ ಶೀಟನ್ನು ಕಲ್ಲಿನಿಂದ ಹೊಡೆದು ರೂ.500/- ನಷ್ಟವುಂಟು ಮಾಡಿದ್ದು, ಆದಕಾರಣ ಆರೋಪಿತರಾದ ನೀವು ಭಾರತೀಯ ದಂಡ ಸಂಹಿತೆ ಕಲಂ 427 ರ ಸಹವಾಚಕ ಕಲಂ 149 ರಡಿಯಲ್ಲಿ ಶಿಕ್ಷಾರ್ಹ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞಾನದೊಳಗೆ ಮಾಡಿರುವಿರಿ.

ಕೊನೆಯದಾಗಿ, ಅದೇ ದಿನ, ಅದೇ ಸಮಯ ಹಾಗೂ ಅದೇ ಸ್ಥಳದಲ್ಲಿ ಆರೋಪಿತರಾದ ನೀವು ಏಕೋದ್ದೇಶದಿಂದ ಅಕ್ರಮ ಕೂಟ ಕಟ್ಟಿಕೊಂಡು ಬಂದು ಚಾಸಾ-1, 4 ಮತ್ತು 5 ರವರಿಗೆ ನಿಮ್ಮನ್ನು ಇಷ್ಟಕ್ಕೆ ಬಿಡುವುದಿಲ್ಲ ಎಂದು ಕೊಲೆ ಮಾಡುವುದಾಗಿ ಕೊಲೆ ಬೆದರಿಕೆ ಹಾಕಿದ್ದು, ಆದಕಾರಣ ಆರೋಪಿತರಾದ ನೀವು ಭಾರತೀಯ ದಂಡ ಸಂಹಿತೆ ಕಲಂ 506 ರ ಸಹವಾಚಕ ಕಲಂ 149 ರಡಿಯಲ್ಲಿ ಶಿಕ್ಷಾರ್ಹ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞಾನದೊಳಗೆ ಮಾಡಿರುವಿರಿ.

ನೀವು ಸದರಿ ಆರೋಪದ ಮೇಲೆ ಈ ನ್ಯಾಯಾಲಯದಿಂದ ವಿಚಾರಣೆಗೆ ಗುರಿಯಾಗತಕ್ಕುದೆಂದು ನಾನು ಈ ಮೂಲಕ ನಿರ್ದೇಶಿಸುತ್ತೇನೆ.

ದಿನಾಂಕ ಃ 20.07.2026

ಸಹಿ

**(**ಊರ್ಮಿಳ**.**ವಿ**)**
**1** ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು
ಮತ್ತು ಪ್ರ**.**ದ**.**ನ್ಯಾ**.**ದಂ**.,** ತರೀಕೆರೆ**.**